# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ, ರಾಯಚೂರು

## ಅಧಿಸೂಚನೆ ಸಂಖ್ಯೆ : 1/ಆಡಳಿತ/2023 ದಿನಾಂಕ : 30.01.2023

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಯಚೂರ ಘಟಕದಲ್ಲಿ ಶೀಘ್ರಲಿಪಿಗಾರರು, ಬೆರಳಚ್ಚುಗಾರರು, ಆದೇಶ ಜಾರಿಕಾರರು ಮತ್ತು ಜವಾನರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ "**ಆನ್‌ಲೈನ್**" ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಉಲ್ಲೇಖ :** 1) ಮಾನ್ಯ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ LCA II 128/2012 dated 21.12.2019.

2) ಮಾನ್ಯ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ DJA-II (LCA II) 128/2012 dated 27.01.2022

3) ನೂತನವಾಗಿ ಈ ಮೊದಲೇ ರಚಿಸಲಾಗಿರುವ ನ್ಯಾಯಾಲಯಗಳ ಅಧಿಸೂಚನೆ ಸಂಖ್ಯೆ :

G.O.No. LAW 135 LCE 2014 dated 11.09.2015.
G.O.No. LAW 137 LCE 2014 dated 28.03.2016.
G.O.No. LAW 112 LCE 2012 dated 28.12.2017.

ಅರ್ಜಿಗಳನ್ನು ರಾಯಚೂರು ಜಿಲ್ಲಾ ನ್ಯಾಯಾಲಯ ವೆಬ್‌ಸೈಟ್ ನಮೂನೆ ಮತ್ತು ಇತರೆ ಮಾಹಿಯನ್ನು https://districts.ecourts.gov.in/raichur ಅಥವಾ http://karnatakajudiciary.kar.nic.in/districtrecruitment.asp ಮೂಲಕ **ಆನ್‌ಲೈನ್‌ನಲ್ಲಿ** ದಿನಾಂಕ : **09.02.2023** ರಿಂದ **10.03.2023** ರಾತ್ರಿ **11:59** ರವರೆಗೆ ಮಾತ್ರ ಸಲ್ಲಿಸತಕ್ಕದ್ದು.

### 1) ಶೀಘ್ರಲಿಪಿಗಾರರು ಗ್ರೇಡ್-III (Stenographer Grade-III) :

ಖಾಲಿ ಹುದ್ದೆಗಳು : 7
ವೇತನ ಶ್ರೇಣಿ : 27650-650-29600-750-32600-850-36000-950-39800-1100-46400-1250-52650 ಹಾಗೂ ಇತರೆ ಭತ್ಯೆಗಳು

**ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದ ಹುದ್ದೆಗಳ ವರ್ಗೀಕರಣ**
**Kalyana Karntaka Local Cadre**

| ಮೀಸಲಾತಿ ವರ್ಗ | ಮಹಿಳೆ | ಗ್ರಾಮೀಣ | ಇತರೆ | ಒಟ್ಟು |
|---|---|---|---|---|
| ಪರಿಶಿಷ್ಟ ಜಾತಿ | - | - | 1 | **1** |
| ಪರಿಶಿಷ್ಟ ಪಂಗಡ | - | - | 1 | **1** |
| ಪ್ರವರ್ಗ-1 | - | - | 1 | **1** |
| ಸಾಮಾನ್ಯ | 1 | 1 | 1 | **3** |
| ಒಟ್ಟು | **1** | **1** | **4** | **6** |

**ಉಳಿಕೆ ಮೂಲವೃಂದ ಹುದ್ದೆಗಳ ವರ್ಗೀಕರಣ**
**Residual Parent Cadre**

| ಮೀಸಲಾತಿ ವರ್ಗ | ಇತರೆ | ಒಟ್ಟು |
|---|---|---|
| ಪರಿಶಿಷ್ಟ ಜಾತಿ | 1 | 1 |
| ಒಟ್ಟು | **1** | **1** |

**ವಿದ್ಯಾರ್ಹತೆ :**

1. ಪಿ.ಯು.ಸಿ ಅಥವಾ ಮೂರು ವರ್ಷಗಳ ಡಿಪ್ಲೊಮೊ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.
2. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ಶ್ರೇಣಿ ಬೆರಳಚ್ಚು ಮತ್ತು ಶೀಘ್ರಲಿಪಿ ಹಿರಿಯ ಶ್ರೇಣಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

**ಆಯ್ಕೆಯ ವಿಧಾನ :**

ಕರ್ನಾಟಕ ಅಧೀನ ನ್ಯಾಯಾಲಯಗಳು ( ಮೀನಿಸ್ಟ್ರೀಯಲ್ ಮತ್ತು ಇತರೆ ಹುದ್ದೆಗಳು) ನೇಮಕಾತಿ ನಿಯಮಗಳು 1982 ಮತ್ತು ( ತಿದ್ದುಪಡಿ) 2007 ರನ್ವಯ ನೇರ ನೇಮಕಾತಿ ಮೂಲಕ ಆಯ್ಕೆ ಮಾಡಲಾಗುವುದು.

ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ನಿಮಿಷ ಒಂದಕ್ಕೆ 120 ಪದಗಳ ದರದಲ್ಲಿ 5 ನಿಮಿಷಗಳ ಉಕ್ತ ಲೇಖನವನ್ನು ತೆಗೆದುಕೊಂಡು, ಉಕ್ತ ಲೇಖನವನ್ನು 45 ನಿಮಿಷಗಳಲ್ಲಿ ಅನುಲಿಪಿ ಮಾಡುವ ಸಾಮರ್ಥ್ಯ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ನಿಗಧಿಪಡಿಸಲಾದ ವಿದ್ಯಾರ್ಹತೆಯ ಪರೀಕ್ಷೆಗಳಲ್ಲಿನ ಮತ್ತು ಅರ್ಹತಾ ಪರೀಕ್ಷೆಯ ಒಟ್ಟು ಅಂಕಗಳ ಶೇಕಡವಾರುವಿನ ಮೊತ್ತದ ಅಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು.

**ಟಿಪ್ಪಣಿ : ಮಾನ್ಯ ಉಚ್ಚ ನ್ಯಾಯಾಲಯದ ಆದೇಶದ ಅನ್ವಯ, ಕನ್ನಡ ಮತ್ತು ಬೆರಳಚ್ಚು ಪರೀಕ್ಷೆಯನ್ನು ಗಣಕಯಂತ್ರದಲ್ಲಿ ನಡೆಸಲಾಗುವುದು. "ಕುವೆಂಪು-ಸುರಭಿ" ತಂತ್ರಾಂಶದಲ್ಲಿರುವ ಗಣಕಯಂತ್ರದ ಕನ್ನಡ ಬೆರಳಚ್ಚು ಕೀಲಿಮಣೆ ಮಾದರಿಯನ್ನು ಈ ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ.**

**ಸಾಮರ್ಥ್ಯ ಪರೀಕ್ಷೆಯು ಕನ್ನಡ ಮತ್ತು ಆಂಗ್ಲ ಬೆರಳಚ್ಚು ತಲಾ 50 ಅಂಕಗಳಂತೆ ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ಅದರಲ್ಲಿ ತೇರ್ಗಡೆಯಾಗಲು ತಲಾ 25 ರಂತೆ ಎರಡು ವಿಷಯಗಳನ್ನು ಸೇರಿಸಿ ಕನಿಷ್ಠ 50 ಅಂಕಗಳನ್ನು ಪಡೆಯಬೇಕು ಮತ್ತು ಸಾಮರ್ಥ್ಯ ಪರೀಕ್ಷೆಯಲ್ಲಿ ತೇರ್ಗಡೆಯದವರನ್ನ ಮಾತ್ರ ಮೌಖಿಕ ಸಂದರ್ಶನಕ್ಕೆ ಕರೆಯಲಾಗುವುದು. ಮೌಖಿಕ ಸಂದರ್ಶನವು 10 ಅಂಕಗಳನ್ನು ಒಳಗೊಂಡಿರುತ್ತದೆ.**

**2) ಬೆರಳಚ್ಚುಗಾರರು (Typist) :**

ಖಾಲಿ ಹುದ್ದೆಗಳು : 1
ವೇತನ ಶ್ರೇಣಿ : 21400-500-22400-550-24600-600-27000-650-29600-750-32600-850-36000-950-39800-1100-42000 ಹಾಗೂ ಇತರೆ ಭತ್ಯೆಗಳು

**ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದ ಹುದ್ದೆಗಳ ವರ್ಗೀಕರಣ**
**Kalyana Karntaka Local Cadre**

| ಮೀಸಲಾತಿ ವರ್ಗ | ಇತರೆ | ಒಟ್ಟು |
|---|---|---|
| ಪರಿಶಿಷ್ಟ ಜಾತಿ | 1 | **1** |
| **ಒಟ್ಟು** | **1** | **1** |

**ವಿದ್ಯಾರ್ಹತೆ :**

1. ಪಿ.ಯು.ಸಿ ಅಥವಾ ಮೂರು ವರ್ಷಗಳ ಡಿಪ್ಲೊಮೊ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.
2. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯೂ ನಡೆಸುವ ಕನ್ನಡ ಮತ್ತು ಇಂಗ್ಲೀಷ್ ಎರಡು ಭಾಷೆಯಲ್ಲೂ ಹಿರಿಯ ಶ್ರೇಣಿ ಬೆರಳಚ್ಚು ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

ಆಯ್ಕೆಯ ವಿಧಾನ :

ಕರ್ನಾಟಕ ಅಧೀನ ನ್ಯಾಯಾಲಯಗಳು ( ಮೀನಿಸ್ಟ್ರೀಯಲ್ ಮತ್ತು ಇತರೆ ಹುದ್ದೆಗಳು) ನೇಮಕಾತಿ ನಿಯಮಗಳು 1982 ಮತ್ತು ( ತಿದ್ದುಪಡಿ) 2007 ರನ್ವಯ ನೇರ ನೇಮಕಾತಿ ಮೂಲಕ ಆಯ್ಕೆ ಮಾಡಲಾಗುವುದು.

ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು 15 ನಿಮಿಷಗಳ ಉಕ್ತ ಲೇಖನದಲ್ಲಿ ಕೊಡುವ ವಿಷಯವನ್ನು ಗಣಕಯಂತ್ರದಲ್ಲಿ ಬೆರಳಚ್ಚು ಮಾಡುವ ಸಾಮರ್ಥ್ಯ ಪರೀಕ್ಷಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ನಿಗಧಿಪಡಿಸಲಾದ ವಿದ್ಯಾರ್ಹತೆಯ ಪರೀಕ್ಷೆಗಳಲ್ಲಿನ ಮತ್ತು ಅರ್ಹತಾ ಪರೀಕ್ಷೆಯ ಒಟ್ಟು ಅಂಕಗಳ ಶೇಕಡವಾರುವಿನ ಮೊತ್ತದ ಅಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು.

**ಟಿಪ್ಪಣಿ : ಮಾನ್ಯ ಉಚ್ಚ ನ್ಯಾಯಾಲಯದ ಆದೇಶದ ಅನ್ವಯ, ಕನ್ನಡ ಮತ್ತು ಬೆರಳಚ್ಚು ಪರೀಕ್ಷೆಯನ್ನು ಗಣಕಯಂತ್ರದಲ್ಲಿ ನಡೆಸಲಾಗುವುದು. "ಕುವೆಂಪು-ಸುರಭಿ" ತಂತ್ರಾಂಶದಲ್ಲಿರುವ ಗಣಕಯಂತ್ರದ ಕನ್ನಡ ಬೆರಳಚ್ಚು ಕೀಲಿಮಣೆ ಮಾದರಿಯನ್ನು ಈ ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ.**

**ಸಾಮರ್ಥ್ಯ ಪರೀಕ್ಷೆಯು ಕನ್ನಡ ಮತ್ತು ಆಂಗ್ಲ ಬೆರಳಚ್ಚು ತಲಾ 50 ಅಂಕಗಳಂತೆ ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ಅದರಲ್ಲಿ ತೇರ್ಗಡೆಯಾಗಲು ತಲಾ 25 ರಂತೆ ಎರಡು ವಿಷಯಗಳನ್ನು ಸೇರಿಸಿ ಕನಿಷ್ಠ 50 ಅಂಕಗಳನ್ನು ಪಡೆಯಬೇಕು ಮತ್ತು ಸಾಮರ್ಥ್ಯ ಪರೀಕ್ಷೆಯಲ್ಲಿ ತೇರ್ಗಡೆಯದವರನ್ನ ಮಾತ್ರ ಮೌಖಿಕ ಸಂದರ್ಶನಕ್ಕೆ ಕರೆಯಲಾಗುವುದು. ಮೌಖಿಕ ಸಂದರ್ಶನವು 10 ಅಂಕಗಳನ್ನು ಒಳಗೊಂಡಿರುತ್ತದೆ.**

## 3) ಆದೇಶ ಜಾರಿಕಾರ(Process-Server) :

ಖಾಲಿ ಹುದ್ದೆಗಳು : 03
ವೇತನ ಶ್ರೇಣಿ : 19950-450-20400-500-22400-550-24600-600-27000-650-29600-750-32600-850-36000-950-37900 ಹಾಗೂ ಇತರೆ ಭತ್ಯೆಗಳು

**ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದ ಹುದ್ದೆಗಳ ವರ್ಗೀಕರಣ**
**Kalyana Karntaka Local Cadre**

| ಮೀಸಲಾತಿ ವರ್ಗ | ಇತರೆ | ಒಟ್ಟು |
|---|---|---|
| ಪರಿಶಿಷ್ಟ ಜಾತಿ | 1 | **1** |
| ಸಾಮಾನ್ಯ | 1 | **1** |
| **ಒಟ್ಟು** | **2** | **2** |

**ಉಳಿಕೆ ಮೂಲವೃಂದ ಹುದ್ದೆಗಳ ವರ್ಗೀಕರಣ**
**Residual Parent Cadre**

| ಮೀಸಲಾತಿ ವರ್ಗ | ಇತರೆ | ಒಟ್ಟು |
|---|---|---|
| ಪರಿಶಿಷ್ಟ ಜಾತಿ | 1 | 1 |
| ಒಟ್ಟು | **1** | **1** |

**ವಿದ್ಯಾರ್ಹತೆ :**
1. ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.
2. ಕನ್ನಡ ಭಾಷೆ ಓದಲು ಮತ್ತು ಬರೆಯಲು ಬರಬೇಕು,

3. ಲಘು ವಾಹನ ಚಾಲನಾ ಪರವಾನಗಿ ಹೊಂದಿದವರಿಗೆ ಆದ್ಯತೆ ನೀಡಲಾಗುವುದು.

**ಆಯ್ಕೆಯ ವಿಧಾನ :**

ಕರ್ನಾಟಕ ಅಧೀನ ನ್ಯಾಯಾಲಯಗಳು ( ಮಿನಿಸ್ಟ್ರೀಯಲ್ ಮತ್ತು ಇತರೆ ಹುದ್ದೆಗಳು) ನೇಮಕಾತಿ ನಿಯಮಗಳು 1982 ಮತ್ತು ( ತಿದ್ದುಪಡಿ) 2007 ರನ್ವಯ ನೇರ ನೇಮಕಾತಿ ಮೂಲಕ ಆಯ್ಕೆ ಮಾಡಲಾಗುವುದು.

ನಿಗಧಿಪಡಿಸಲಾದ ವಿದ್ಯಾರ್ಹತೆಯ ಪರೀಕ್ಷೆಗಳಲ್ಲಿನ ಒಟ್ಟು ಅಂಕಗಳ ಶೇಕಡವಾರುವಿನ ಮೊತ್ತದ ಅಧಾರದ ಮೇಲೆ 1:25 ರಂತೆ ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಪ್ರಕಟಿಸಿರುವ ಹುದ್ದೆಗಳಿಗೆ ಅನುಗುಣವಾಗಿ ಅರ್ಹ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಸಂಧರ್ಶನದಲ್ಲಿ ಗಳಿಸುವ ಅಂಕಗಳ ಅಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಟಿಪ್ಪಣಿ :** ಸಂದರ್ಶನವು 10 ಅಂಕಗಳನ್ನು ಒಳಗೊಂಡಿರುತ್ತದೆ.

**4) ಜವಾನ(Peon)**

ಖಾಲಿ ಹುದ್ದೆಗಳು : 22

ವೇತನ ಶ್ರೇಣಿ : 17000-400-18600-450-20400-500-22400-550-24600-600-27000-650-28950 ಹಾಗೂ ಇತರೆ ಭತ್ಯೆಗಳು

**ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದ ಹುದ್ದೆಗಳ ವರ್ಗೀಕರಣ**

**Kalyana Karntaka Local Cadre**

| ಮೀಸಲಾತಿ ವರ್ಗ | ಇತರೆ | ಮಹಿಳೆ | ಗ್ರಾಮೀಣ | ಅಂ.ವಿ | ಒಟ್ಟು |
|---|---|---|---|---|---|
| ಸಾಮಾನ್ಯ | 2 | 3 | 2 | 1 (LV) | **8** |
| ಪರಿಶಿಷ್ಟ ಜಾತಿ | 1 | 1 | 1 | - | **3** |
| ಪರಿಶಿಷ್ಟ ಪಂಗಡ | 1 | 1 | - | - | **2** |
| ಪ್ರವರ್ಗ-1 | 1 | - | - | - | **1** |
| ಪ್ರವರ್ಗ-2 ಎ | 1 | 1 | - | - | **2** |
| ಪ್ರವರ್ಗ-2 ಬಿ | 1 | - | - | - | **1** |
| ಪ್ರವರ್ಗ-3 ಎ | 1 | - | - | - | **1** |
| ಒಟ್ಟು | **8** | **6** | **3** | **1** | **18** |

* LV- Low vision

**ಉಳಿಕೆ ಮೂಲವೃಂದ ಹುದ್ದೆಗಳ ವರ್ಗೀಕರಣ**

**Residual Parent Cadre**

| ಮೀಸಲಾತಿ ವರ್ಗ | ಇತರೆ | ಮಹಿಳೆ | ಒಟ್ಟು |
|---|---|---|---|
| ಸಮಾನ್ಯ | 1 | 1 | 2 |
| ಪರಿಶಿಷ್ಟ ಜಾತಿ | 1 | - | 1 |
| ಪರಿಶಿಷ್ಟ ಪಂಗಡ | 1 | - | 1 |
| ಒಟ್ಟು | **3** | **1** | **4** |

**ವಿದ್ಯಾರ್ಹತೆ :**

1. ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.
2. ಕನ್ನಡ ಭಾಷೆ ಓದಲು ಮತ್ತು ಬರೆಯಲು ಬರಬೇಕು.

**ಆಯ್ಕೆಯ ವಿಧಾನ :**

ಕರ್ನಾಟಕ ಅಧೀನ ನ್ಯಾಯಾಲಯಗಳು ( ಮೀನಿಸ್ಟ್ರೀಯಲ್ ಮತ್ತು ಇತರೆ ಹುದ್ದೆಗಳು) ನೇಮಕಾತಿ ನಿಯಮಗಳು 1982 ಮತ್ತು ( ತಿದ್ದುಪಡಿ) 2007 ರನ್ವಯ ನೇರ ನೇಮಕಾತಿ ಮೂಲಕ ಆಯ್ಕೆ ಮಾಡಲಾಗುವುದು.

ನಿಗಧಿಪಡಿಸಲಾದ ವಿದ್ಯಾರ್ಹತೆಯ ಪರೀಕ್ಷೆಗಳಲ್ಲಿನ ಒಟ್ಟು ಅಂಕಗಳ ಶೇಕಡವಾರುವಿನ ಮೊತ್ತದ ಆಧಾರದ ಮೇಲೆ 1:10 ರಂತೆ ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಪ್ರಕಟಿಸಿರುವ ಹುದ್ದೆಗಳಿಗೆ ಅನುಗುಣವಾಗಿ ಅರ್ಹ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸುವ ಅಂಕಗಳ ಅಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಟಿಪ್ಪಣಿ :** ಸಂದರ್ಶನವು 10 ಅಂಕಗಳನ್ನು ಒಳಗೊಂಡಿರುತ್ತದೆ.

**ವಯೋಮಿತಿ:**

ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು:

ಅ, ಕನಿಷ್ಠ 18 ವರ್ಷ ವಯಸ್ಸನ್ನು ಪೂರ್ಯೈಸಿರತಕ್ಕದ್ದು

ಆ. ಗರಿಷ್ಠ ವಯೋಮಿತಿ ಈ ಕೆಳಗಿನ ಕೋಷ್ಟಕದಂತೆ :

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| ಪ್ರವರ್ಗ 2 ಎ, 2 ಬಿ, 3 ಎ, 3 ಬಿ | 38 ವರ್ಷ |
| ಪ.ಜಾತಿ, ಪ. ಪಂಗಡ, ಪ್ರವರ್ಗ-1 | 40 ವರ್ಷ |

ಅಭ್ಯರ್ಥಿಗಳು ಈ ಅಧಿಸೂಚನೆಯ ದಿನಾಂಕದಂದು ಗರಿಷ್ಠ ವಯಸ್ಸನ್ನು ಮೀರಿರಕೂಡದು ಮತ್ತು ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಮಾಜಿ ಸೈನಿಕರಿಗೆ ಹಾಗೂ ಅಂಗವಿಕಲರಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು ಹಾಗೂ ಗ್ರಾಮೀಣ ಅಭ್ಯರ್ಥಿಗಳ ಮೀಸಲಾತಿಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷಗಳಲ್ಲಿ ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳೂ ಸಹ ಲಭ್ಯಗಾಗದಿದ್ದಲ್ಲಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮೀಸಲಾದ ಹುದ್ದೆಗಳನ್ನು ಹೊರತುಪಡಿಸಿ ಇನ್ನುಳಿದ ಹಿಂದುಳಿದ ವರ್ಗಗಳ ಹುದ್ದೆಗಳನ್ನು ಸಾಮಾನ್ಯ ವರ್ಗದ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

ಸಂದರ್ಶನಕ್ಕೆ ಆಯ್ಕೆಯಾಗುವ ಅಭ್ಯರ್ಥಿಗಳು ರಾಯಚೂರು ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದು, ಅರ್ಜಿಗಳನ್ನು ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರ ಮೂಲಕ ಕಳುಹಿಸಬೇಕು.

**ಪರಿವೀಕ್ಷಣಾ ಅವಧಿ :**

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ ( ಪರಿವೀಕ್ಷಣಾ ನಿಯಮಗಳು) 1977 ರ ಪ್ರಕಾರ 02 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಅವರುಗಳ ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

**ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ :**

ಆಯ್ಕೆಯಾದ ಅಭ್ಯರ್ಥಿಗಳು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಕರ್ನಾಟಕ ಸಿವಿಲ್ ಸೇವಾ ( ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ ) ನಿಯಮಗಳು, 2012 ಹಾಗೂ ತಿದ್ದುಪಡಿ ನಿಯಮಗಳು, 2015 ರನ್ವಯ ಪ್ರತಿಶತ 50 ರಂತೆ ಅಂಕಗಳನ್ನು ಪಡೆದು ಪರಿವೀಕ್ಷಣಾ ಅವಧಿಯೊಳಗೆ ಉತ್ತೀರ್ಣರಾಗತಕ್ಕದ್ದು

**ಅರ್ಜಿ ಸಲ್ಲಿಸುವ ವಿಧಾನ :**

ಮೇಲಿನ ಎಲ್ಲಾ ಹುದ್ದಗಳಿಗೆ ಪಾವತಿಸಬೇಕಾದ ನಿಗದಿತ ಅರ್ಜಿ ಶುಲ್ಕ ಹಾಗೂ ವಿಧಾನ :

| | |
|---|---|
| ಸಾಮಾನ್ಯ, 2 ಎ, 2 ಬಿ, 3 ಎ, 3 ಬಿ | ರೂ.200/- |
| ಪ.ಜಾತಿ, ಪ.ಪಂಗಡ, ಪ್ರವರ್ಗ-1, ಅಂ.ವಿ | ರೂ.100/- |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ https://districts.ecourts.gov.in/raichur ಅಥವಾ http://karnatakajudiciary.kar.nic.in/districtrecruitment.asp ನಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ State Bank collect ಮೂಲಕ online payment through net banking/credit card/debit card/challan download ಸೌಲಭ್ಯದ ಮೂಲಕ ಪಾವತಿಸತಕ್ಕದ್ದು . ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿ ಮಾಡಲು ಇಚ್ಚಿಸದ ಅಭ್ಯರ್ಥಿಗಳು ಚಲನ್ ಪ್ರತಿಯನ್ನ ಅಧಿಕೃತಿ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಅದರ Print out ಅನ್ನು ಪಡೆದುಕೊಂಡು ಎಸ್.ಬಿ.ಐ ನ ಯಾವುದೇ ಶಾಖೆಗೆ ಹಾಜರುಪಡಿಸಿ, ಶುಲ್ಕವನ್ನು ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಡ್ರಾಫ್ಟ್/ಪೋಸ್ಟಲ್ ಆರ್ಡರ್/ಮನಿ ಆರ್ಡರ್ ಇವುಗಳನ್ನು ಸ್ವೀಕರಿಸುವುದಿಲ್ಲ.

**ಪಿಂಚಣಿ ಸೌಲಭ್ಯ :**

ಸರ್ಕಾರದ ಆದೇಶ ಸಂಖ್ಯೆ : ಎಫ್‌ಡಿಃ(ಎಸ್‌ಪಿಎಲ್)/04/p/e/t/2005, dt : 31.03.2006 ರಂತೆ ಅನ್ವಯಿಸುವುದು.

ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.

1. ಅಭ್ಯರ್ಥಿಗಳು ಅರ್ಜಿಯನ್ನು Online ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
2. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಜನ್ಮ ದಿನಾಂಕ, ವಿದ್ಯಾರ್ಹತೆ, ಮೀಸಲಾತಿ ಹಾಗೂ ವಯೋಮಿತಿ ಸಡಿಲಿಕ, ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಅನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.
3. ಅಭ್ಯರ್ಥಿಗಳ ಮೊಬೈಲ್ ಸಂಖ್ಯೆಯನ್ನು ಕಡ್ಡಯಾವಾಗಿ ನಮೂದಿಸುವುದು ಹಾಗೂ ಇ ಮೇಲ್ ಐಡಿಯನ್ನು ಹೊಂದಿದಲ್ಲಿ ನಮೂದಿಸುವುದು. ಒಂದು ವೇಳೆ SMS ಅಥವಾ ಇ ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.
4. ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು

ಅ) ಬಣ್ಣದ ಭಾವಚಿತ್ರವು ಇತ್ತೀಚಿನದಾಗಿದ್ದು ಅಳತೆಯಲ್ಲಿ 5 CM ಉದ್ದ X 3.6 CM ಅಗಲವುಳ್ಳದಾಗಿರಬೇಕು ಮತ್ತು 50kb ಅಳತೆಯದ್ದಾಗಿರಬೇಕು ಹಾಗೂ ಅದು jpg ನಮೂನೆಯಲ್ಲಿರಬೇಕು.

ಆ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು ( ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು)

ಇ) ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5 CM ಉದ್ದ X 7.5 CM ಅಗಲವುಳ್ಳದಾಗಿರಬೇಕು ಮತ್ತು 25kb ಅಳತೆಯದ್ದಾಗಿರಬೇಕು ಹಾಗೂ ಅದು jpg ನಮೂನೆಯಲ್ಲಿರಬೇಕು) ಅಪ್‌ಲೋಡ್ ಮಾಡಬೇಕು.

5. ತದನಂತರ ಅಭ್ಯರ್ಥಿಯು ಅರ್ಜಿಯಲ್ಲಿ ಕೇಳಲಾದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಸಂದರ್ಶನದ / ದಾಖಲಾತಿ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
6. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ ಹಾಗೂ ಬೇರೆ ಯಾವುದೇ ನೇಮಕಾತಿಗೂ ಹೊಂದಾಣಿಕೆ ಮಾಡಿಕೊಳ್ಳುವುದಿಲ್ಲ.
7. ಈ ವೆಬ್‌ಸೈಟ್ https://districts.ecourts.gov.in/raichur ಅಥವಾ http://karnatakajudiciary.kar.nic.in/districtrecruitment.asp ನಲ್ಲಿ ಕೊನೆಯ ದಿನಾಂಕ : ರಾತ್ರಿ 11:59 ರವರೆಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಅ) ಶುಲ್ಕವನ್ನು ಚಲನ್ ಮುಖಾಂತರ ಪಾವತಿಸಲು ದಿನಾಂಕ : ಕೊನೆಯ ದಿನಾಂಕವಾಗಿದ್ದು ಅದರೊಳಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಶಾಖೆಯ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು.

8. ಸಂದರ್ಶನದ ವೇಳಾಪಟ್ಟಿಯನ್ನು ಈ ವೆಬ್‌ಸೈಟ್ https://districts.ecourts.gov.in/raichur ಅಥವಾ http://karnatakajudiciary.kar.nic.in/districtrecruitment.asp ನಲ್ಲಿ ಪ್ರಕಟಿಸಲಾಗುವುದು. ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಸಂದರ್ಶನಕ್ಕೆ ಪ್ರವೇಶ ಪತ್ರಗಳನ್ನು ಅಭ್ಯರ್ಥಿಗಳಿಗೆ ಪ್ರತ್ಯೇಕವಾಗಿ ರವಾನಿಸಲಾಗುವುದು.

**ಇತರೆ ಸೂಚನೆಗಳು :**

1. ಅಭ್ಯರ್ಥಿಗಳು ಸಂದರ್ಶನದ /ದಾಖಲಾತಿ ಪರಿಶೀಲನೆಯ ಸಮಯದಲ್ಲಿ ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸತಕ್ಕದ್ದು.
   ಅ) ಅನ್‌ಲೈನ್ ಮೂಲಕ ಸಲ್ಲಿಸಲಾದ ಅರ್ಜಿಯ ಪ್ರತಿ.
   ಆ) ಹುದ್ದೆಗೆ ನಿಗದಿಪಡಿಸಿದ ಶುಲ್ಕವನ್ನು ಪಾವತಿಸಿದ ರಶೀದಿ ಪ್ರತಿ.
   ಇ) ಎಸ್.ಎಸ್.ಎಲ್.ಸಿ ಅಂಕಪಟ್ಟಿ ಹಾಗೂ ಆಯಾ ಹುದ್ದೆಗಳಿಗೆ ನಿಗದಿಪಡಿಸಿರುವ ವಿದ್ಯಾರ್ಹತೆಗೆ ಸಂಬಂಧಿಸಿದ ಅಂಕಪಟ್ಟಿಗಳು.
   ಈ) ಪರಿಶಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ "ಡಿ" ಯಲ್ಲಿ ಪ್ರವರ್ಗ-1 ರ ಅಭ್ಯರ್ಥಿಗಳು ನಮೂನೆ "ಇ" ಯಲ್ಲಿ ಮತ್ತು 2 ಎ, 2 ಬಿ ಮತ್ತು 3 ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ "ಎಫ್" ನಲ್ಲಿ ಸಂಬಂದಿಸಿದ ತಹಶೀಲ್ದಾರರಿಂದ ಪಡೆದ ಚಾಲ್ತಿಯಲ್ಲಿರುವ ಜಾತಿ / ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳು.
2. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ : ಸಿಅಸುಇ/96/ಸೇನನಿ/2005, ದಿನಾಂಕ : 10.08.2005 ರ ಪ್ರಕಾರ ನಿಗದಿತ ನಮೂನೆ-2 ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿರಬೇಕು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.
3. ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣ ಪತ್ರ ನಮೂನೆ-2 ರ ಜೊತೆ ನಮೂನೆ-1 ರಲ್ಲಿ ಧೃಡೀಕರಣ ಪತ್ರ ಹೊಂದಿರಬೇಕು.
4. ಅಂಗವಿಕಲ (ಅಂ.ವಿ) ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ 19.11.2005 ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿ ಅಸು ಇ/115/ಸೇನೆನಿ/2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪಡೆದ ಪ್ರಮಾಣ ಪತ್ರಗಳು.
5. ಮಾಜಿ ಸೈನಿಕ( ಮಾ.ಸೈ) ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ/ ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ.
6. ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಗಳಿಗಾಗಿ ಅರ್ಜಿ ಸಲ್ಲಿಸುವವರು ಸರ್ಕಾರದ ಅಧಿಸೂಚನೆ ಸಂಖ್ಯೆ : ಡಿಪಿಎಆರ್ 43 ಹೆಚ್ಕೆಸಿ 2013 ಬೆಂಗಳೂರು ದಿನಾಂಕ: 29.01.2014 ರಲ್ಲಿ ನಿಗಧಿಪಡಿಸಿದ ಕರ್ನಾಟಕ ಸಾರ್ವಜನಿಕ ನಿಯಮಗಳು 2013 ರ ನಿಯಮ 3(3) ರಲ್ಲಿ ಗೊತ್ತುಪಡಿಸಿರುವಂತೆ ಅನುಬಂಧ-ಎ ಯಲ್ಲಿರುವಂತೆ "ಅರ್ಹತಾ ಪ್ರಮಾಣ ಪತ್ರ" ವನ್ನು ಸಂಬಂಧಪಟ್ಟ ಸಹಾಯಕ ಆಯುಕ್ತರಿವರಿಂದ ಹಾಗೂ ಸೇವಾನಿರತ ಅಭ್ಯರ್ಥಿಗಳು ಸ್ವಾಗ್ರಾಮ ಪ್ರಮಾಣವನ್ನು ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರದಿಂದ ಅಧಿಸೂಚನೆಯ ಕೊನೆಯ ದಿನಾಂಕದ ಒಳಗಾಗಿ ಪಡೆದಿರಬೇಕು.
7. ಸರ್ಕಾರದ ಸುತ್ತೋಲೆ ಸಂಖ್ಯೆ : ಸಿಆಸುಎ 78 ಹೈಕಕೋ 2014 ಬೆಂಗಳೂರು ದಿನಾಂಕ 22.05.2015 ಮತ್ತು 06.06.2020 ರನ್ವಯ ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದದ ಮೀಸಲಾತಿ ಕೋರುವ ಅಭ್ಯರ್ಥಿಗಳು ಮಿಕ್ಕಳಿದ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೂ ತಮ್ಮ ಅಭ್ಯರ್ಥಿತನವನ್ನು ಪರಿಗಣಿಸಲು ಆಯ್ಕೆ ಮಾಡುವ ಅವಕಾಶವನ್ನು ಹೊಂದಿರುತ್ತಾರೆ. ಅರ್ಜಿಯಲ್ಲಿ ವಿವರವಾಗಿ ತೋರಿಸಿರುವಂತೆ ಆಯ್ಕೆಗಳನ್ನು ಮಾಡಲು ಅಭ್ಯರ್ಥಿಗಳನ್ನು ಮಾಡಲು ಅಭ್ಯರ್ಥಿಗಳಿಗೆ ಸೂಚಿಸಲಾಗಿದೆ. ಆದ್ದರಿಂದ ಅಭ್ಯರ್ಥಿಗಳು ಸ್ಥಳೀಯ ವೃಂದ ಹಾಗೂ ಮಿಕ್ಕುಳಿದ ವೃಂದದಲ್ಲಿ ಬೇರೆ ಬೇರೆಯಾಗಿ ಅರ್ಜಿ ಸಲ್ಲಿಸುವ ಪ್ರಮೇಯ ಬರುವುದಿಲ್ಲ. ಕೇವಲ ಒಂದು ಅರ್ಜಿಯನ್ನು ಮಾತ್ರ ಸಲ್ಲಿಸಬಹುದು.

8. ವಿಧವೆಯರು, ಜೀತ ಕಾರ್ಮಿಕರು ಹಾಗೂ ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸುವುದು.
9. ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳ ಒಳಗೆ ಪಡೆದ ಇಬ್ಬರು ಗೌರವಾನ್ವಿತ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣಪತ್ರ ಹಾಗೂ ಶಾಲಾ ನಡತೆ ಪ್ರಮಾಣಪತ್ರಗಳು.
10. ಮೇಲ್ಕಂಡ ಹುದ್ದೆಗಳಿಗೆ ನಿಗದಿಪಡಿಸಿರುವ ಇತರೆ ಅವಶ್ಯಕ ದಾಖಲಾತಿಗಳು.
11. ಮೇಲ್ಕಂಡ ದಾಖಲೆಗಳು ನಿಗದಿತ ನಮೂನೆಗಳಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಕ್ಕೆ ಮೊದಲು ಪಡೆದ ದಾಖಲೆಗಳಾಗಿರಬೇಕು ಹಾಗೂ ಸದರಿ ದಾಖಲೆಗಳ ಮೂಲ ದಾಖಲೆಗಳನ್ನು ಪರಿಶೀಲನೆ ಸಮಯದಲ್ಲಿ ಹಾಜರುಪಡಿಸಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ದಾಖಲೆಗಳನ್ನ ಪರಿಗಣಿಸಲಾಗುವುದಿಲ್ಲ.
12. ಸಂದರ್ಶನಕ್ಕೆ ದಾಖಲಾತಿ ಪರಿಶೀಲನೆಗೆ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಹಾಜರಾಗಬೇಕು.
13. ಈ ನೇಮಕಾತಿ ಸಂಬಂಧವಾಗಿ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸಲು ಆಸ್ಪದವಿರುವುದಿಲ್ಲ.

30/11/2023

**( ಮಾರುತಿ ಶಿವಾಜಿ ಬಾಗಡೆ )**
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ರಾಯಚೂರು
Prl. District & Sessions Judge
RAICHUR.

**ಅಧಿಸೂಚನೆಯ ನಕಲನ್ನು ಈ ಕೆಳಕಂಡವರ ಅವಗಾಹನೆಗಾಗಿ ಸಲ್ಲಿಸಲಾಗಿದೆ:**
ಮಹಾವಿಲೇಖನಾಧಿಕಾರಿಗಳು,
ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು-560001

**ಅಧಿಸೂಚನೆಯ ನಕಲನ್ನು ಈ ಕೆಳಕಂಡವರಿಗೆ ರವಾನಿಸಲಾಗಿದೆ.**
1. ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮಾಂತರ, ಬಾಗಲಕೋಟೆ, ಬೆಳಗಾವಿ, ಮೈಸೂರು, ಬೀದರ್, ವಿಜಯಪುರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಗದಗ, ಕಲಬುರಗಿ, ಹಾಸನ, ಹಾವೇರಿ, ಕೊಡಗು, ಕೋಲಾರ, ಕೊಪ್ಪಳ, ಮಂಗಳೂರು, ಮಂಡ್ಯ, ರಾಮನಗರ, ತುಮಕೂರು, ಉಡುಪಿ, ಮತ್ತು ಕಾರವಾರ ಇವರಿಗೆ, ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನೆ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮಕೈಗೊಳ್ಳುವಂತೆ ಕೋರಲಾಗಿದೆ.
2. ವಿಲೇಖನಾಧಿಕಾರಿಗಳು, ನಗರ ಸಿವಿಲ್ ನ್ಯಾಯಾಲಯ, ಬೆಂಗಳೂರು ಇವರಿಗೆ ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮಕಕೈಗೊಳ್ಳುವಂತೆ ಕೋರಿದೆ.
3. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಲಿಂಗಸೂಗುರು.
4. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಸಿಂಧನೂರು.
5. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ದೇವದುರ್ಗ.
6. ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮಾನವಿ.
7. ಪ್ರಧಾನ/ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಲಿಂಗಸೂಗುರು.
8. ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ದೇವದುರ್ಗ.
9. ಪ್ರಧಾನ/ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಸಿಂಧನೂರು.
10. ಸದರಿ ಮೇಲ್ಕಾಣಿಸಿದ ಕ್ರ.ಸಂ.3 ರಿಂದ 9 ರವರೆಗಿನ ಸಂಬಂಧಪಟ್ಟ ನ್ಯಾಯಾಧೀಶರುಗಳಿಗೆ ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿದೆ.
11. ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಶಾಖಾ ಮುದ್ರಣಾಲಯ, ಕಲಬುರಗಿ-ಇವರಿಗೆ ಕರ್ನಾಟಕ ರಾಜ್ಯ ವಾರ್ತಾ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ.
12. ನಿರ್ದೇಶಕರು, ವಾರ್ತಾ, ಪ್ರಚಾರ ಮತ್ತು ಪ್ರವಾಸೋದ್ಯಮ ಇಲಾಖೆ, ರಾಯಚೂರು ಇವರಿಗೆ ಸಾದಿಲ್ವಾರು ವೆಚ್ಚ ಕೈಪಿಡಿ ನಿಯಮ 55(ಬಿ)(ಡಿ) ಪ್ರಕಾರ 2 ಹೆಚ್ಚು ಪ್ರಸಾರ ಉಳ್ಳ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಚಾರಪಡಿಸುವ ಕುರಿತು.
13. ತಾಂತ್ರಿಕ ತಜ್ಞರು, ಜಿಲ್ಲಾ ನ್ಯಾಯಾಲಯ, ರಾಯಚೂರು.

"ನ್ಯಾಯಾಲಯದ ಆದೇಶದ ಮೇರೆಗೆ"

**ಮುಖ್ಯ ಆಡಳಿತಾಧಿಕಾರಿಗಳು,**
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,
ರಾಯಚೂರು.

Chelf Administrative Officer
District & Sessions Court
RAICHUR.

# KANNADA KEY BOARD LAYOUT

